# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಕ್ಷಿಣ ಕನ್ನಡ ಜಿಲ್ಲೆ, ಧರ್ಮಸ್ಥಳ ಪೊಲೀಸ್ ಠಾಣೆ ಮೊ.ಸಂ. 39/2025 ಕಲಂ. 211(ಎ), ಬಿ.ಎನ್.ಎಸ್ ಅಡಿಯಲ್ಲಿ ದಾಖಲಾಗಿರುವ ಪ್ರಕರಣ ಹಾಗೂ ಇದರ ಸಂಬಂಧ ಇತರೆ ಪೊಲೀಸ್ ಠಾಣೆಗಳಲ್ಲಿ ದಾಖಲಾಗಬಹುದಾದ ಪ್ರಕರಣಗಳ ಸಮಗ್ರ ತನಿಖೆಗಾಗಿ ವಿಶೇಷ ತನಿಖಾ ತಂಡ (Special Investigation Team) ವನ್ನು ರಚಿಸುವ ಬಗ್ಗೆ.

**ಓದಲಾಗಿದೆ:**
1. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಆಯೋಗ ರವರ ಪತ್ರ ಸಂಖ್ಯೆ:ಕರಾಮಾ/ಅಆಶಾ/481/2025-26/7817, ದಿನಾಂಕ: 14.07 2025.
2. ದಕ್ಷಿಣ ಕನ್ನಡ ಜಿಲ್ಲೆ, ಧರ್ಮಸ್ಥಳ ಪೊಲೀಸ್ ಠಾಣೆ ಮೊ.ಸಂ. 39/2025 ಕಲಂ. 211(ಎ) ಬಿ.ಎನ್.ಎಸ್ ಪ್ರಕರಣ.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಅಧ್ಯಕ್ಷರು ಕರ್ನಾಟಕ ರಾಜ್ಯ ಮಹಿಳಾ ಆಯೋಗ ರವರ ಪತ್ರದಲ್ಲಿ ಧರ್ಮಸ್ಥಳದ ಭಾಗದಲ್ಲಿ ನೂರಾರು ಶವಗಳನ್ನು ಹೂತಿರುವುದಾಗಿ ವ್ಯಕ್ತಿಯೊಬ್ಬರು ನ್ಯಾಯಾಲಯದಲ್ಲಿ ಹೇಳಿಕೆಯನ್ನು ದಾಖಲಿಸಿದ್ದಾರೆ. ದಿನಾಂಕ: 12-07-2025ರಂದು ಟೈಮ್ಸ್ ನೌ ಮತ್ತಿತರ ಮಾಧ್ಯಮಗಳು ಮನುಷ್ಯರೊಬ್ಬರ ತಲೆಬುರುಡೆ ದೊರಕಿದ ಬಗ್ಗೆ ಹಾಗೂ ನಾಪತ್ತೆಯಾದ ವೈದ್ಯಕೀಯ ವಿದ್ಯಾರ್ಥಿನಿಯೊಬ್ಬರ ಕುಟುಂಬದವರ ಹೇಳಿಕೆಯ ವರದಿ ಪ್ರಸಾರವಾಗಿರುವುದನ್ನು ಆಯೋಗವು ಗಂಭೀರವಾಗಿ ಪರಿಗಣಿಸಿದೆ. ಈ ಮಾಧ್ಯಮ ವರದಿ ಮತ್ತು ಶವಗಳನ್ನು ಹೂತಿರುವ ವ್ಯಕ್ತಿಯ ಹೇಳಿಕೆಯಲ್ಲಿ ಕಳೆದ 20ಕ್ಕೂ ಹೆಚ್ಚು ವರ್ಷ ಗಂಭೀರ ಸ್ವರೂಪದ ದೌರ್ಜನ್ಯ, ಹತ್ಯೆ, ಅತ್ಯಾಚಾರ, ಅಸ್ವಾಭಾವಿಕವಾದ ಸಾವು ಮತ್ತು ನಾಪತ್ತೆ ಪ್ರಕರಣಗಳು ಹಲವು ಮಹಿಳೆಯರ, ವಿದ್ಯಾರ್ಥಿನಿಯರ ಮೇಲೆ ನಡೆದಿರುವ ಬಗ್ಗೆ ತಿಳಿಸಲಾಗಿದೆ. ಹಾಗಾಗಿ ಧರ್ಮಸ್ಥಳದ ವ್ಯಾಪ್ತಿಯಲ್ಲಿ ಕಳೆದ 20 ವರ್ಷಗಳಿಂದ ನಾಪತ್ತೆಯಾಗಿರುವ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ಪ್ರಕರಣಗಳು, ಅಸ್ವಾಭಾವಿಕವಾದ ಸಾವು/ ಕೊಲೆ ಪ್ರಕರಣಗಳು ಮತ್ತು ಅತ್ಯಾಚಾರ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆಗಾಗಿ ಹಿರಿಯ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ(ಎಸ್.ಐ.ಟಿ) ರಚಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (2)ರಂತೆ, ದಕ್ಷಿಣ ಕನ್ನಡ ಜಿಲ್ಲೆ, ಧರ್ಮಸ್ಥಳ ಪೊಲೀಸ್ ಠಾಣೆ ಮೊ.ಸಂ. 39/2025 ಕಲಂ 211(ಎ), ಬಿ.ಎನ್.ಎಸ್ ಅಡಿಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಅಧ್ಯಕ್ಷರು, ಕರ್ನಾಟಕ ರಾಜ್ಯ ಮಹಿಳಾ ಆಯೋಗ ರವರ ಪತ್ರದಲ್ಲಿ ಪ್ರಸ್ತಾಪಿಸಿರುವ ಅಂಶಗಳು ಹಾಗೂ ದಕ್ಷಿಣ ಕನ್ನಡ ಜಿಲ್ಲೆ, ಧರ್ಮಸ್ಥಳ ಪೊಲೀಸ್ ಠಾಣೆ ಮೊ.ಸಂ. 39/2025 ಕಲಂ 211(ಎ), ಬಿ.ಎನ್.ಎಸ್, ಪ್ರಕರಣಕ್ಕೆ ಸಂಬಂಧಿಸಿದಂತೆ ಸಮಗ್ರ ತನಿಖೆಯನ್ನು ಕೈಗೊಳ್ಳಲು ಒಂದು ವಿಶೇಷ ತನಿಖಾ ತಂಡ (Special Investigation Team)ವನ್ನು ರಚಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 142 ಸಿಒಡಿ 2025,**
**ಬೆಂಗಳೂರು, ದಿನಾಂಕ. 19/07/2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 39/2025 ಕಲಂ 211(ಎ),

ಬಿ.ಎನ್.ಎಸ್, ಪ್ರಕರಣದ ಸಮಗ್ರ ತನಿಖೆಯನ್ನು ಕೈಗೊಳ್ಳಲು ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡ ವಿಶೇಷ ತನಿಖಾ ತಂಡ (Special Investigation Team) ವನ್ನು ರಚಿಸಿ ಸರ್ಕಾರವು ಆದೇಶಿಸಿದೆ.

| | | |
|---|---|---|
| 1. | ಡಾ|| ಪ್ರಣವ ಮೊಹಾಂತಿ, ಐ.ಪಿ.ಎಸ್.,<br>ಪೊಲೀಸ್ ಮಹಾ ನಿರ್ದೇಶಕರು,<br>ಆಂತರಿಕ ಭದ್ರತಾ ವಿಭಾಗ, ಬೆಂಗಳೂರು. | - ಮುಖ್ಯಸ್ಥರು |
| 2. | ಶ್ರೀ ಎಂ.ಎನ್ ಅನುಚೇತ್, ಐ.ಪಿ.ಎಸ್.,<br>ಉಪ ಪೊಲೀಸ್ ಮಹಾ ನಿರೀಕ್ಷಕರು,<br>ನೇಮಕಾತಿ, ಬೆಂಗಳೂರು. | - ಸದಸ್ಯರು |
| 3. | ಶ್ರೀಮತಿ ಸೌಮ್ಯಲತ, ಐ.ಪಿ.ಎಸ್.,<br>ಉಪ ಪೊಲೀಸ್ ಆಯುಕ್ತರು,<br>ಸಿ.ಎ.ಆರ್. ಕೇಂದ್ರಸ್ಥಾನ,<br>ಬೆಂಗಳೂರು ನಗರ. | - ಸದಸ್ಯರು |
| 4. | ಶ್ರೀ ಜಿತೇಂದ್ರ ಕುಮಾರ್ ದಯಾಮ, ಐ.ಪಿ.ಎಸ್.,<br>ಪೊಲೀಸ್ ಅಧೀಕ್ಷಕರು,<br>ಆಂತರಿಕ ಭದ್ರತಾ ವಿಭಾಗ, ಬೆಂಗಳೂರು. | - ಸದಸ್ಯರು |

ಮೇಲ್ಕಂಡ ಪ್ರಕರಣವೂ ಸೇರಿದಂತೆ ಹಾಗೂ ಇದರ ಸಂಬಂಧ ಕರ್ನಾಟಕ ರಾಜ್ಯದ ಇತರೆ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ / ದಾಖಲಾಗುವ ಇತರೆ ಎಲ್ಲಾ ಕ್ರಿಮಿನಲ್ ಪ್ರಕರಣಗಳ ತನಿಖೆಯನ್ನು ಡಿಜಿ ಮತ್ತು ಐಜಿಪಿ ರವರು ಈ ವಿಶೇಷ ತನಿಖಾ ತಂಡ (Special Investigation Team)ಕ್ಕೆ ವರ್ಗಾಯಿಸುವುದು ಹಾಗೂ ವಿಶೇಷ ತನಿಖಾ ತಂಡಕ್ಕೆ ಅವಶ್ಯವಿರುವ ಇತರೆ ಅಧಿಕಾರಿ /ಸಿಬ್ಬಂದಿಗಳನ್ನು ಒದಗಿಸುವುದು. ಈ ವಿಶೇಷ ತನಿಖಾ ತಂಡವು (Special Investigation Team) ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಳ್ಳುವುದು.

ವಿಶೇಷ ತನಿಖಾ ತಂಡವು ತನಿಖೆಗೆ ಸಂಬಂಧಿಸಿದ ತನಿಖಾ ಪ್ರಗತಿಯನ್ನು ಆಗಿಂದಾಗ್ಗೆ ಡಿಜಿ ಮತ್ತು ಐಜಿಪಿ ರವರಿಗೆ ವರದಿ ಮಾಡುವುದು.

ವಿಶೇಷ ತನಿಖಾ ತಂಡವು ಮೇಲ್ಕಂಡಂತೆ ದಾಖಲಾಗಿರುವ ಪ್ರಕರಣ ಹಾಗೂ ಇದರ ಸಂಬಂಧ ರಾಜ್ಯದ ಇತರೆ ಪೊಲೀಸ್ ಠಾಣೆಗಳಲ್ಲಿ ದಾಖಲಾಗುವ ಎಲ್ಲಾ ಪ್ರಕರಣಗಳ ಸಮಗ್ರ ತನಿಖೆಯನ್ನು ನಡೆಸಿ, ತನಿಖಾ ವರದಿಯನ್ನು ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾನಿರೀಕ್ಷಕರು, ಬೆಂಗಳೂರು ರವರ ಮುಖಾಂತರ ಶೀಘ್ರವಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

S. Ambika 19/7/2025
**(ಎಸ್.ಅಂಬಿಕಾ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ(ಅಪರಾಧಗಳು)

**ಇವರಿಗೆ:**

1. ಮಹಾ ನಿರ್ದೇಶಕರು ಹಾಗೂ ಆರಕ್ಷಕ ಮಹಾ ನಿರೀಕ್ಷಕರು ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು.

2. ಡಾ|| ಪ್ರಣವ ಮೊಹಾಂತಿ, ಐ.ಪಿ.ಎಸ್.,ಪೊಲೀಸ್ ಮಹಾ ನಿರ್ದೇಶಕರು,ಆಂತರಿಕ ಭದ್ರತಾ ವಿಭಾಗ, ಬೆಂಗಳೂರು.
3. ಶ್ರೀ ಎಂ.ಎನ್ ಅನುಚೇತ್, ಐ.ಪಿ.ಎಸ್.,ಉಪ ಪೊಲೀಸ್ ಮಹಾ ನಿರೀಕ್ಷಕರು, ನೇಮಕಾತಿ, ಬೆಂಗಳೂರು.
4. ಶ್ರೀಮತಿ ಸೌಮ್ಯಲತ., ಐ.ಪಿ.ಎಸ್.,ಉಪ ಪೊಲೀಸ್ ಆಯುಕ್ತರು,ಸಿ.ಎ.ಆರ್. ಕೇಂದ್ರಸ್ಥಾನ, ಬೆಂಗಳೂರು ನಗರ.
5. ಶ್ರೀ ಜಿತೇಂದ್ರ ಕುಮಾರ್ ದಯಾಮ. ಐ.ಪಿ.ಎಸ್.,ಪೊಲೀಸ್ ಅಧೀಕ್ಷಕರು, ಆಂತರಿಕ ಭದ್ರತಾ ವಿಭಾಗ, ಬೆಂಗಳೂರು.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷ ಕಡತ.

**ಪ್ರತಿಯನ್ನು:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಿಸಿಎಎಸ್), ಒಳಾಡಳಿತ ಇಲಾಖೆ ರವರ ಆಪ್ತ ಕಾರ್ಯದರ್ಶಿ ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಜಂಟಿ ಕಾರ್ಯದರ್ಶಿ(ಅಪರಾಧಗಳು, ಸೆರೆಮನೆ ಮತ್ತು ಸಿನಿಮಾ), ಒಳಾಡಳಿತ ಇಲಾಖೆ ರವರ ಆಪ್ತ ಸಹಾಯಕರು, ವಿಧಾನಸೌಧ, ಬೆಂಗಳೂರು.